ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿಆರ್-03/2023-24 ದಿನಾಂಕ: 11.07.2024

## ಸುತ್ತೋಲೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 13.07.2024 ಮತ್ತು 14.07.2024 ರಂದು ಈ ಕೆಳಕಂಡ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪರೀಕ್ಷೆಯನ್ನು ನಡೆಸಲಾಗುತ್ತಿದೆ.

1. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ – ನಿರ್ವಾಹಕರು (ಕಲ್ಯಾಣ ಕರ್ನಾಟಕ) ಹುದ್ದೆಗಳಿಗೆ,
2. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ – ಸಹಾಯಕ ಲೆಕ್ಕಿಗ, ಸಹಾಯಕ ಸಂಚಾರ ನಿರೀಕ್ಷಕ, ಕ.ರಾ.ಸಾ. ಪೇದೆ, ಕುಶಲಕರ್ಮಿ ಮತ್ತು ತಾಂತ್ರಿಕ ಸಹಾಯಕ ಹುದ್ದೆಗಳಿಗೆ ಮತ್ತು
3. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ – ಪ್ರಥಮ ದರ್ಜೆ ಲೆಕ್ಕ ಸಹಾಯಕರು ಹುದ್ದೆಗಳಿಗೆ.

ಮೇಲ್ಕಂಡ ಸಂಸ್ಥೆಗಳಲ್ಲಿನ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಈಗಾಗಲೇ ಲಿಂಕ್‌ನ್ನು ಬಿಡುಗಡೆಮಾಡಲಾಗಿರುತ್ತದೆ. ಕೆಲವು ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿರುವ ಕಾರಣ ಒಂದಕ್ಕಿಂತ ಹೆಚ್ಚು ಪ್ರವೇಶ ಪತ್ರಗಳು ಬಿಡುಗಡೆಯಾಗಿರುತ್ತದೆ.

**ಒಂದೇ ದಿನಾಂಕದಂದು ಒಂದಕ್ಕಿಂತ ಹೆಚ್ಚು ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ಪತ್ರ ಹೊಂದಿರುವ ಅಭ್ಯರ್ಥಿಗಳು ಯಾವುದಾದರು ಒಂದು ಪರೀಕ್ಷಾ ಕೇಂದ್ರದಲ್ಲಿ ಮಾತ್ರ ಪರೀಕ್ಷೆಗೆ ಹಾಜರಾಗತಕ್ಕದ್ದು ಮತ್ತು ಪರೀಕ್ಷೆ ನಂತರ ಪರೀಕ್ಷೆಗೆ ಹಾಜರಾದ ಪ್ರವೇಶ ಪತ್ರದೊಂದಿಗೆ ಅಭ್ಯರ್ಥಿಯು ಹಾಜರಾಗದೆ ಉಳಿದ ಇನ್ನೊಂದು ಪರೀಕ್ಷಾ ಕೇಂದ್ರದ ಪ್ರವೇಶ ಪತ್ರವನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.**

ದಿನಾಂಕ 13.07.2024 & 14.07.2024 ರಂದು ನಡೆಯಲಿರುವ ಪರೀಕ್ಷಾ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಮಾತ್ರ ಅವಕಾಶ ನೀಡಲಾಗಿದ್ದು, ಕಡ್ಡಾಯ ಕನ್ನಡ ಪರೀಕ್ಷೆಯ ಪ್ರವೇಶ ಪತ್ರವನ್ನು ನಂತರದ ದಿನಗಳಲ್ಲಿ ಕೆಇಎ ವೆಬ್‌ಸೈಟ್‌ನಲ್ಲಿ ಬಿಡುಗಡೆಗೊಳಿಸಲಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in